**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

**ಸಂಖ್ಯೆ**:ಕಾಶಿಇ/252/ಖಾಪ್ರಪ್ರಾಂಅಗರ/2021-22/ಸೇವಿ-1 ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ: 23.11. 2022.

**ಇವರಿಗೆ:**
ಜಂಟಿ ನಿರ್ದೇಶಕರು
ಪ್ರಾದೇಶಿಕ ಕಛೇರಿ
ಕಾಲೇಜು ಶಿಕ್ಷಣ ಇಲಾಖೆ
ಬೆಂಗಳೂರು, ಮೈಸೂರು, ಧಾರವಾಡ
ಮಂಗಳೂರು, ಶಿವಮೊಗ್ಗ, ಕಲಬುರ್ಗಿ

**ಮಾನ್ಯರೆ,**

**ವಿಷಯ:** ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರಿಗೆ ಗಳಿಕೆ ರಜೆ ನೀಡುವ ಕುರಿತು

**ಉಲ್ಲೇಖ:**
1) ಸರ್ಕಾರದ ಪತ್ರ ಸಂಖ್ಯೆ:ಇಡಿ/140/ಯುಪಿಸಿ 2018, ದಿನಾಂಕ:26.10.2018.
2) ಈ ಕಛೇರಿಯ ಸಮ ಸಂಖ್ಯೆಯ ಪತ್ರ ದಿನಾಂಕ:08.08.2022.
3) ಸರ್ಕಾರದ ಪತ್ರ ಸಂಖ್ಯೆ:ಇಡಿ/123 ಯುಪಿಸಿ 2022 (ಇ), ದಿನಾಂಕ:02.11.2022.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಆಡಳಿತ ಮಂಡಳಿಗಳು ನೇಮಕ ಮಾಡಿಕೊಂಡಿರುವ ಪ್ರಭಾರ ಪ್ರಾಂಶುಪಾಲರುಗಳಿಗೆ ಇಲಾಖೆ/ಸರ್ಕಾರದಿಂದ ಅನುಮೋದನೆ ನೀಡುತ್ತಿಲ್ಲವಾದ್ದರಿಂದ ಹಾಗೂ ಯಾವುದೇ ಹೆಚ್ಚುವರಿ ಆರ್ಥಿಕ ಸೌಲಭ್ಯಗಳನ್ನು ನೀಡದೇ ಇರುವುದರಿಂದ ಅವರುಗಳಿಗೆ ಅನುಪಾತ ಗಳಿಕೆ ರಜೆಯ ಸೌಲಭ್ಯ ಮತ್ತು ಅದರ ನಗದೀಕರಣ ಸೌಲಭ್ಯವನ್ನು ಸಂಬಂಧಪಟ್ಟ ಆಡಳಿತ ಮಂಡಳಿಯು ಭರಿಸಲು ತಿಳಿಸುವಂತೆ ಉಲ್ಲೇಖ (1)ರ ಪತ್ರದಲ್ಲಿ ನಿರ್ದೇಶಿಸಲಾಗಿದೆ.

ಅನುದಾನಿತ ಪದವಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರು ಮತ್ತು ಪ್ರಭಾರ ಪ್ರಾಂಶುಪಾಲರುಗಳಿಗೆ ಅನುಪಾತ ಗಳಿಕೆ ರಜೆ ಮಂಜೂರಾತಿ ಸಂಬಂಧದ ವಿಷಯವು ಸರ್ಕಾರದ ಕಾರ್ಯ ನೀತಿ ವಿಷಯವಾಗಿರುವುದರಿಂದ ಈ ಕುರಿತು ಸರ್ಕಾರದ ಮಾರ್ಗದರ್ಶನ ನೀಡುವಂತೆ ಉಲ್ಲೇಖ (2)ರ ಈ ಕಛೇರಿಯ ದಿನಾಂಕ:08.08.2022ರ ಸಮ ಸಂಖ್ಯೆಯ ಪತ್ರದಲ್ಲಿ ಸರ್ಕಾರಕ್ಕೆ ಸಲ್ಲಿಸಲಾಗಿತ್ತು.

ಉಲ್ಲೇಖ (3) ಸರ್ಕಾರದ ಪತ್ರದಲ್ಲಿ"ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆ ಮಂಜೂರಾಗಿರುವುದಿಲ್ಲ. ಕಾಲೇಜಿನ ಆಡಳಿತ ಮಂಡಳಿಯವರು ಪ್ರಭಾರಿ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ನಿಯಮಿಸಿದವರಿಗೆ ಇಲಾಖೆ/ಸರ್ಕಾರದಿಂದ ಅನುಮೋದನೆ ನೀಡದೆ ಇರುವುದರಿಂದ ಅನುದಾನಿತ ಪದವಿ ಕಾಲೇಜುಗಳ ಪ್ರಭಾರ ಪ್ರಾಂಶುಪಾಲರುಗಳಿಗೆ ಅನುಪಾತ ಗಳಿಕೆ ರಜೆ ಸೌಲಭ್ಯವನ್ನು ಮತ್ತು ಅದರ ನಗದೀಕರಣ ಸೌಲಭ್ಯವನ್ನು ಆಡಳಿತ ಮಂಡಳಿಯು ಭರಿಸಲು ಈಗಾಗಲೇ ತಿಳಿಸಲಾಗಿರುತ್ತದೆ" ಎಂದು ನಿರ್ದೇಶಿಸಿದ್ದು, ಅದರಂತೆ ಕ್ರಮವಹಿಸಲು ಸೂಚಿಸಲಾಗಿದೆ.

**ತಮ್ಮ ವಿಶ್ವಾಸಿ**

**ಅಡಕ**:ಉಲ್ಲೇಖ (3)ರ ಸರ್ಕಾರದ ಪತ್ರ

24.11.22

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

**ಪ್ರತಿಯನ್ನು**:
1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು-ಮಾಹಿತಿಗಾಗಿ.

..2..

2. ಮಾನ್ಯ ಆಯುಕ್ತರು/ನಿರ್ದೇಶಕರು/ಹೆಚ್ಚುವರಿ ನಿದೇಶಕರ ಆಪ್ತ ಶಾಖೆಗಳಿಗೆ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ ಬೆಂಗಳೂರು.
3. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧದಲ್ಲಿ ಅಗತ್ಯ ಕ್ರಮಕ್ಕಾಗಿ.
4. ಕಛೇರಿ ಪ್ರತಿ.

4961809
5/11/2022

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 123 ಯುಪಿಸಿ 2022 (ಇ)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02-11-2022

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು.

ಇವರಿಗೆ:
ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.

03 NOV 2022

ಮಾನ್ಯರೆ,

ವಿಷಯ: ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರಿಗೆ ಗಳಿಕೆ ರಜೆ ನೀಡುವ ಕುರಿತು.

ಉಲ್ಲೇಖ:
1. ಪತ್ರ ಸಂಖ್ಯೆ:ಕಾಶಿಇ/252/ಖಾಪ್ರಪ್ರಾಂ.ಅಗರ/2021-22/ ಸೇವಿ-1, ದಿನಾಂಕ:08-08-2022.
2. ಸರ್ಕಾರದ ಪತ್ರ ಸಂಖ್ಯೆ:ಇಡಿ/140/ಯುಪಿಸಿ 2018 ದಿನಾಂಕ:26-10-2018.

*******

ಮೇಲ್ಕಂಡ ವಿಷಯಕ್ಕೆ ಸಬಂಧಿಸಿದಂತೆ, ಉಲ್ಲೇಖಿತ (1) ರ ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆ ಮಂಜೂರಾಗಿರುವುದಿಲ್ಲ. ಉಲ್ಲೇಖಿತ (2) ರಲ್ಲಿ ಕಾಲೇಜಿನ ಆಡಳಿತ ಮಂಡಳಿಯವರು ಪ್ರಭಾರಿ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ನಿಯಮಿಸಿದವರಿಗೆ ಇಲಾಖೆ/ಸರ್ಕಾರದಿಂದ ಅನುಮೋದನೆ ನೀಡದೆ ಇರುವುದರಿಂದ ಅನುದಾನಿತ ಪದವಿ ಕಾಲೇಜುಗಳ ಪ್ರಭಾರ ಪ್ರಾಂಶುಪಾಲರುಗಳಿಗೆ ಅನುಪಾತ ಗಳಿಕೆ ರಜೆ ಸೌಲಭ್ಯವನ್ನು ಮತ್ತು ಅದರ ನಗದೀಕರಣ ಸೌಲಭ್ಯವನ್ನು ಆಡಳಿತ ಮಂಡಳಿಯು ಭರಿಸಲು ಈಗಾಗಲೆ ತಿಳಿಸಲಾಗಿರುತ್ತದೆ ಎಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

2/11/22
(ಮಧು ಎ.ಸಿ.)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ).